# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 722 |
| ಸದಸ್ಯರ ಹೆಸರು | : | ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22.02.2022. |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ನಗರಾಭಿವೃದ್ಧಿ ಇಲಾಖಾ ಅಡಿ ಬರುವ ಮಹಾನಗರಪಾಲಿಕೆ ಮತ್ತು ನಗರಾಭಿವೃದ್ಧಿ ಪ್ರಾಧಿಕಾರ ಕಛೇರಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರುಗಳಿಗೆ ವರ್ಗಾವಣೆ ನಿಷೇಧವೆ; ನಿಷೇಧವಿದ್ದಲ್ಲಿ ಯಾವ ಕಾರಣಕ್ಕಾಗಿ ಈ ಆದೇಶವನ್ನು ಮಾಡಲಾಗಿರುತ್ತದೆ; (ಮಾಹಿತಿ ಹಾಗೂ ಆದೇಶದ ಪ್ರತಿ ಒದಗಿಸುವುದು) | **ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಸಂಬಂಧಿಸಿದಂತೆ:-**<br><br>ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮ 1987 ರ ಕಲಂ 66 (1) ರನ್ವಯ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿಕಾರಿ / ಸಿಬ್ಬಂದಿಗಳನ್ನು ಸರ್ಕಾರವು ಒಂದು ಪ್ರಾಧಿಕಾರದ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಇನ್ಯಾವುದೇ ಪ್ರಾಧಿಕಾರ ಅಥವಾ ಸ್ಥಳೀಯ ಪ್ರಾಧಿಕಾರದ ಸೇವೆಗೆ ವರ್ಗಾಯಿಸಬಹುದು.<br>ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮ 1987 ರ ಕಲಂ 66 (2) ಉಪಪ್ರಕರಣ (1) ರಡಿಯಲ್ಲಿ ಮಾಡಲಾದ ವರ್ಗಾವಣೆಯನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವ ಉದ್ದೇಶದಿಂದ ತನ್ನ ವಿವೇಚನೆಯನ್ವಯ ಸಾಮಾನ್ಯ ಅಥವಾ ವಿಶೇಷ ನಿರ್ದೇಶನವನ್ನು ಹೊರಡಿಸುವ ಅಧಿಕಾರವನ್ನು ಸರ್ಕಾರವು ಹೊಂದಿರತಕ್ಕದ್ದು ಮತ್ತು ಅಂತಹ ನಿರ್ದೇಶನವನ್ನು ಸಂಬಂಧಪಟ್ಟ ಪ್ರಾಧಿಕಾರ ಅಥವಾ ಸ್ಥಳೀಯ ಪ್ರಾಧಿಕಾರವು ತಪ್ಪದೇ ಪಾಲಿಸತಕ್ಕದ್ದು.<br>ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮ 1987 ಕಲಂ 52 ರನ್ವಯ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಪ್ರಾಧಿಕಾರವಾರು ಅಧಿಕಾರಿ / ಸಿಬ್ಬಂದಿಗಳ ನೇಮಕಾತಿಯಾಗುತ್ತದೆ. ಹೀಗಾಗಿ, ಪ್ರಾಧಿಕಾರದ ಸಿಬ್ಬಂದಿಗಳು ನಿವೃತ್ತಿಯಾಗುವವರೆಗೆ ಒಂದೇ ಪ್ರಾಧಿಕಾರದಲ್ಲಿ ಕಾರ್ಯ ನಿರ್ವಹಿಸುತ್ತಾರೆ<br>**ಮಹಾನಗರ ಪಾಲಿಕೆಗಳಿಗೆ ಸಂಬಂಧಿಸಿದಂತೆ:-**<br>ರಾಜ್ಯದ 10 ಮಹಾನಗರ ಪಾಲಿಕೆಗಳಿಗೆ (ಬಿಬಿಎಂಪಿ ಹೊರತುಪಡಿಸಿ) ಸಂಬಂಧಿಸಿದಂತೆ ಏಕರೂಪದ ವೃಂದ ಮತ್ತು ನೇಮಕಾತಿ ನಿಯಮಗಳು 2011ನ್ನು ಪ್ರತ್ಯೇಕವಾಗಿ ರಚಿಸಲಾಗಿರುತ್ತದೆ. ಅದರನ್ವಯ ಮಹಾನಗರ ಪಾಲಿಕೆ ಮತ್ತು ನಗರಾಭಿವೃದ್ಧಿ ಪ್ರಾಧಿಕಾರಗಳ ಮಧ್ಯ ವರ್ಗಾವಣೆಗೆ ಅವಕಾಶ ಕಲ್ಪಿಸಿರುವುದಿಲ್ಲ.<br>ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ವರ್ಗಾವಣೆ ಮಾರ್ಗಸೂಚಿಯನ್ವಯ ನಿಯಮಾನುಸಾರ ಕ್ರಮವಹಿಸಲಾಗುವುದು. ರಾಜ್ಯದ ಮಹಾನಗರಪಾಲಿಕೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಕೆ.ಸಿ.ಎಸ್.ಆರ್. ಅಳವಡಿಸಿಕೊಳ್ಳಲಾಗಿದೆ. |
| ಆ) | ಮಹಾನಗರ ಪಾಲಿಕೆ ಮತ್ತು ನಗರಾಭಿವೃದ್ಧಿ ಪ್ರಾಧಿಕಾರ ಕಛೇರಿಯಲ್ಲಿ ಕಳೆದ 15-20 ವರ್ಷಗಳಿಂದ ಒಂದೇ ಸ್ಥಳದಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳಿಂದ ಸಮಯಕ್ಕೆ ಸರಿಯಾಗಿ ಸ್ವಚ್ಛ ಹಾಗೂ ನ್ಯಾಯಬದ್ಧ ಕೆಲಸವನ್ನು ಪಡೆಯಲು ಸಾಧ್ಯವೇ; ಇವರುಗಳನ್ನು ವರ್ಗಾವಣೆ ಮಾಡಲು ಕಾನೂನಿನಲ್ಲಿ ಇರುವ ತೊಡಕಾದರೂ ಏನು; ಕೆ.ಸಿ.ಎಸ್.ಆರ್ ನಿಯಮ ಇವರುಗಳಿಗೆ ಅನ್ವಯವಾಗುವುದಿಲ್ಲವೆ? (ವಿವರ ನೀಡುವುದು) | |

ಸಂಖ್ಯೆ: ನಅಇ 32 ಎಂಎನ್ಇ 2022(ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು